ಪತ್ರಿಕೆ / ಟಿವಿ ಚಾನೆಲ್ ಹೆಸರು : ಪ್ರಜಾವಾಣಿ

ಪತ್ರಿಕೆಯ ಹೆಸರು : NAME OF THE NEWS PAPER : ಪ್ರಜಾವಾಣಿ ದಿನಾಂಕ : 14/12/2013

# ಅಕ್ರಮವಾಗಿ ನಿರ್ಮಿಸಿದ ಕಟ್ಟಡಕ್ಕೆ ಮುಕ್ತಿ ಕಿರಿಗೆ

## ತೆರವುಗೊಳಿಸುವವರೆಗೂ ದಂಡ: ಸಂಪುಟ ತೀರ್ಮಾನ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಬೆಂಗಳೂರು ನಗರದಲ್ಲಿ ಕಟ್ಟಡ ನಿಯಮ (ಬೈ-ಲಾ) ಉಲ್ಲಂಘಿಸಿ ಅಕ್ರಮವಾಗಿ ಮನೆ, ವಾಣಿಜ್ಯ ಕಟ್ಟಡಗಳನ್ನು ನಿರ್ಮಿಸಿದವರಿಗೆ ದುಪ್ಪಟ್ಟು ಆಸ್ತಿ ತೆರಿಗೆ ವಿಧಿಸಲು ರಾಜ್ಯ ಸರ್ಕಾರ ತೀರ್ಮಾನಿಸಿದೆ.

ಇದಕ್ಕಾಗಿ ಕರ್ನಾಟಕ ಮುನಿಸಿಪಲ್ ಕಾರ್ಪೊರೇಷನ್ (1976) ಕಾಯ್ದೆಗೆ ತಿದ್ದುಪಡಿ ಮಾಡಲು ಸಚಿವ ಸಂಪುಟ ಸಭೆ ನಿರ್ಧರಿಸಿದೆ. ಈ ಕಾನೂನು ಈಗಾಗಲೇ ಬೆಂಗಳೂರು ಬಿಟ್ಟು ಉಳಿದ ಪಾಲಿಕೆಗಳಲ್ಲಿ ಜಾರಿಯಲ್ಲಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ.ಮಾಧುಸ್ವಾಮಿ ಮಾಧ್ಯಮಗೋಷ್ಠಿಯಲ್ಲಿ ತಿಳಿಸಿದರು.

ಉಲ್ಲಂಘನೆ ಮಾಡಿ ನಿರ್ಮಿಸಿದವರು ಅಕ್ರಮ ಕಟ್ಟಡಗಳನ್ನು ತೆರವುಗೊಳಿಸುವವರೆಗೆ ಅಥವಾ ಬಿಬಿಎಂಪಿ ಮುಂದಿನ ಕ್ರಮ ತೆಗೆದುಕೊಳ್ಳುವವರೆಗೂ ದಂಡ ವಿಧಿಸಲಾಗುತ್ತದೆ ಎಂದು ಸಚಿವರು ಹೇಳಿದರು.

'ನಿಯಮ ಉಲ್ಲಂಘಿಸಿ ಕಟ್ಟಡ ನಿರ್ಮಿಸುವುದನ್ನು ನಿರ್ಬಂಧಿಸಲು ಅಧಿಕಾರಿಗಳು ಹಲವು ಕ್ರಮಗಳನ್ನು ಕೈಗೊಂಡಿದ್ದರೂ ಅದಕ್ಕೆ ಕಡಿವಾಣ ಬಿದ್ದಿಲ್ಲ. ಹಿಂದಿನ ಸರ್ಕಾರಗಳೂ ಕಠಿಣ ಕ್ರಮ ತೆಗೆದುಕೊಂಡಿಲ್ಲ. ಈ ನಿಟ್ಟಿನಲ್ಲಿ ನಮ್ಮ ಸರ್ಕಾರ ದಿಟ್ಟ ಕ್ರಮ ತೆಗೆದುಕೊಂಡಿದೆ. ಇದು ಆದಾಯವನ್ನು ಹೆಚ್ಚಿಸುವ ತಂತ್ರ ಅಲ್ಲ' ಎಂದು ಸಚಿವರು ಸ್ಪಷ್ಟಪಡಿಸಿದರು.

ಕಾಯ್ದೆಯ ಪ್ರಕಾರ, ಯಾವುದೇ ವ್ಯಕ್ತಿ ನಿಯಮ ಉಲ್ಲಂಘಿಸಿ ಕಟ್ಟಡ ನಿರ್ಮಿಸಿದರೆ ಅಥವಾ ಅನುಮತಿ ಪಡೆಯದೇ ವಿಸ್ತರಣೆ ಮಾಡಿದರೆ ಪ್ರತಿವರ್ಷ ದುಪ್ಪಟ್ಟು ದಂಡ ವಿಧಿಸಲು ಅವಕಾಶವಿದೆ. ಅನಧಿಕೃತ ನಿರ್ಮಾಣವನ್ನು ತೆರವುಗೊಳಿಸುವವರೆಗೂ ದಂಡ ವಿಧಿಸಬಹುದು. ಅಂದರೆ ಸ್ವತ್ತಿನ ಮಾಲೀಕ ಪಾಲಿಕೆಗೆ ₹10,000 ದಂಡ ಪಾವತಿಸುತ್ತಿದ್ದರೆ, ಹೊಸ ಕಾನೂನು ಜಾರಿಗೆ ಬಂದ ಬಳಿಕ ₹20,000 ದಂಡ ಪಾವತಿಸಬೇಕಾಗುತ್ತದೆ.

ಬಿಬಿಎಂಪಿ ಅಧಿಕಾರಿಗಳ ಪ್ರಕಾರ, ಪ್ರತಿ ವರ್ಷ ಸುಮಾರು ₹3,000 ಕೋಟಿ ಆಸ್ತಿ ತೆರಿಗೆ ಸಂಗ್ರಹವಾಗುತ್ತದೆ. ₹500 ಕೋಟಿ ಬಾಕಿಯನ್ನೂ ಸಂಗ್ರಹಿಸಲಾಗುತ್ತದೆ. ಕಟ್ಟಡಗಳಿಗೆ ಅನುಮತಿ ನೀಡುವ ಮೂಲಕ ₹500 ಕೋಟಿ ಸಂಗ್ರಹವಾಗುತ್ತದೆ.

# ಬೆಂಗಳೂರು ಜೈಲಿನಲ್ಲಿ ಹೈ ಸೆಕ್ಯುರಿಟಿ ವಾರ್ಡ್

## ಇವಿಎಂ, ವಿವಿಪ್ಯಾಟ್ ರಕ್ಷಣೆಗೆ ಗೋದಾಮು ಭೂ ಒತ್ತುವರಿ ತೆರವು ಸಮಿತಿಗೆ ಬೋಪಯ್ಯ ಅಧ್ಯಕ್ಷ

ಪ್ರಜಾವಾಣಿ ವಾರ್ತೆ

ಂಗಳೂರು: ನಗರದ ಕೇಂದ್ರ ಾಗೃಹದಲ್ಲಿ ಅತಿ ಭದ್ರತಾ ವಾರ್ಡ್ (ಹೈ ಸೆಕ್ಯುರಿಟಿ ವಾರ್ಡ್) ನಿರ್ಮಿಸಲು ಿಸಿದ ಸಂಪುಟ ಸಭೆ ನಿರ್ಧರಿಸಿದೆ.

ಈ ಉದ್ದೇಶಕ್ಕಾಗಿ ₹100 ಕೋಟಿ ತ್ತು ವಿಜಯಪುರ ಕಾರಾಗೃಹದಲ್ಲಿ ಪ ಬ್ಯಾರಕ್ ನಿರ್ಮಿಸಲು ₹99.98 ಟಿ ನೀಡಲು ಶುಕ್ರವಾರ ನಡೆದ ಕಿರಿ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಯಿತು ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ. ಾಧುಸ್ವಾಮಿ ತಿಳಿಸಿದರು.

ಾಗೃಹದಲ್ಲಿ ಕುಖ್ಯಾತ ಭೂಗತಪಾತಕಿ ಲಾಗುವುದು. ಕೋರ್ಟ್ ಆದೇಶದ ಮೇರೆಗೆ ನಿರ್ಮಾಣಕ್ಕೆ ನಿರ್ಧರಿಸಲಾಗಿದೆ ಎಂದು ಅವರು ವಿವರಿಸಿದರು.

**ಬೋಪಯ್ಯ ಅಧ್ಯಕ್ಷ:** ಸರ್ಕಾರಿ ಜಮೀನು ಸಂರಕ್ಷಣಾ ಸಮಿತಿಯನ್ನು ಪುನರ್ ರಚಿಸಿರುವ ರಾಜ್ಯ ಸರ್ಕಾರ, ಬಿಜೆಪಿ ಶಾಸಕ ಕೆ.ಜಿ.ಬೋಪಯ್ಯ ಅವರನ್ನು ಅಧ್ಯಕ್ಷರನ್ನಾಗಿ ನೇಮಿಸಿದೆ.

ಹಿಂದೆ ಶಾಸಕ ಎ.ಟಿ.ರಾಮಸ್ವಾಮಿ ಅಧ್ಯಕ್ಷತೆಯ ಸಮಿತಿ ರಚಿಸಲಾಗಿತ್ತು. ಅದನ್ನು ಈಗ ಪುನಾರಚನೆ ಮಾಡಲು ಸಂಪುಟ ಸಭೆ ನಿರ್ಧರಿಸಿದೆ. ನೂತನ ಸಮಿತಿಯಲ್ಲಿ ವಿಧಾನಪರಿಷತ್ ಸದಸ್ಯರಾದ ಅರಗ ಜ್ಞಾನೇಂದ್ರ, ಎಸ್.ಆರ್.ವಿಶ್ವನಾಥ್, ಎ.ಟಿ.ರಾಮಸ್ವಾಮಿ, ರಾಜಶೇಖರ ವಿಧಾನಸಭಾ ಕ್ಷೇತ್ರದ ಶಾಸಕರು, ರಾಜಗೋಪಾಲ ನಗರ ಶಾಸಕ ಮುನಿರತ್ನ, ಎ.ಟಿ.ರಾಮಸ್ವಾಮಿ ನೇತೃತ್ವದಲ್ಲಿ ಜಂಟಿ ಸರ್ವೆ ಸಮಿತಿ ರಚಿಸಲಾಗಿತ್ತು. ಈ ಸಮಿತಿ ಮಾಡಿದ್ದ ವರದಿ, ರಾಜಗೋಪಾಲ ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 13,814.27 ಎಕರೆ ಭೂಮಿ ಒತ್ತುವರಿ ಪತ್ತೆ ಹಚ್ಚಿತ್ತು. ಅದರಲ್ಲಿ 2,400 ಎಕರೆ ಜಾಗವನ್ನು ತೆರವುಗೊಳಿಸುವ ನಿಟ್ಟಿನಲ್ಲಿ ಈ ಸಮಿತಿ ಕಾರ್ಯನಿರ್ವಹಿಸಲಿದೆ ಎಂದರು.

## ಸಚಿವ ಸಂಪುಟದ ಪ್ರಮುಖ ನಿರ್ಧಾರಗಳು

- ಪೀಣ್ಯದ ಕೆಎಸ್ಎಸ್ಐಡಿಸಿ ಕೈಗಾರಿಕಾ ವಸಾಹತು, ಹುಬ್ಬಳ್ಳಿಯ ಎಂ.ಟಿ.ಸಾಗರ್ ವಸಾಹತುವಿನಲ್ಲಿ ಮೂಲಸೌಕರ್ಯ ಮೇಲ್ದರ್ಜೆಗೇರಿಸಲು ಕ್ರಮವಾಗಿ ₹50 ಕೋಟಿ ಮತ್ತು ₹18 ಕೋಟಿ ನಿಗದಿ.
- ಅಕ್ರಮ ಗಣಿಗಾರಿಕೆ ತನಿಖೆಗೆ ಲೋಕಾಯುಕ್ತ ರಚಿಸಿದ್ದ ವಿಶೇಷ ತನಿಖಾ ತಂಡದ ಕಾರ್ಯ ಅವಧಿ ಒಂದು ವರ್ಷಕ್ಕೆ ವಿಸ್ತರಣೆ.
- ಚುನಾವಣಾ ಆಯೋಗದ ಇವಿಎಂ ಮತ್ತು ವಿವಿಪ್ಯಾಟ್‌ಗಳ ಸಂರಕ್ಷಣೆ ಮತ್ತು ಭದ್ರತೆಗಾಗಿ ಎಲ್ಲಾ ಜಿಲ್ಲೆಗಳಲ್ಲಿ ಗೋದಾಮುಗಳನ್ನು ಸ್ಥಾಪಿಸಲು ₹123 ಕೋಟಿ ಬಿಡುಗಡೆಗೆ ಆಡಳಿತಾತ್ಮಕ ಅನುಮೋದನೆ.
- ಬೆಂಗಳೂರು ಜಿಲ್ಲೆಯ ಮಾದನಾಯಕನಹಳ್ಳಿ ಗ್ರಾಮ ಪಂಚಾಯಿತಿಯ ಮಾದಾಪರ ಮತ್ತು ಸಿದ್ದನ ಹೊಸಹಳ್ಳಿ ಸೇರಿಸಿ ಪುರಸಭೆ ರಚಿಸಲು ತೀರ್ಮಾನ.
- ಬೆಂಗಳೂರಿನ ಇಂದಿರಾಗಾಂಧಿ ಆಸ್ಪತ್ರೆಯಲ್ಲಿ 450 ಹಾಸಿಗೆ ಸಾಮರ್ಥ್ಯದ ಮಕ್ಕಳ ಹೊಸ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣಕ್ಕೆ ₹132.31 ಕೋಟಿ ಬಿಡುಗಡೆಗೆ ಅನುಮತಿ.